# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 601 |
| ಸದಸ್ಯರ ಹೆಸರು | : | ಶ್ರೀ ಎಸ್. ರುದ್ರೇಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 20.02.2024 |
| ಉತ್ತರಿಸುವ ಸಚಿವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಕಳೆದ ಅಧಿವೇಶನದಲ್ಲಿ ಸರ್ಕಾರವು ಮೈಸೂರು ಕಾಗದ ಕಾರ್ಖಾನೆ (ಎಂ.ಪಿ.ಎಂ.), ಭದ್ರಾವತಿ ಇದರ ಪುನಶ್ಚೇತನಕ್ಕೆ ಕ್ರಮ ವಹಿಸಲಾಗುವುದೆಂದು ಭರವಸೆ ನೀಡಿದ್ದು, ಈ ಕಾರ್ಖಾನೆಯ ಪುನರಾರಂಭದ ಬಗ್ಗೆ ಈವರೆಗೆ ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣಗಳೇನು; | ಸರ್ಕಾರವು ಮೈಸೂರು ಕಾಗದ ಕಾರ್ಖಾನೆಯ ಪುನರುಜ್ಜೀವನ ಸಾಧ್ಯವಿಲ್ಲವೆಂದು ತೀರ್ಮಾನಿಸಿ ಕಾರ್ಖಾನೆಯ ಕಾರ್ಯಚಟುವಟಿಕೆಗಳನ್ನು ಖಾಸಗಿಯವರಿಗೆ ಗುತ್ತಿಗೆ ಆಧಾರದಲ್ಲಿ ನೀಡಬೇಕೆಂದು ತೀರ್ಮಾನ ಕೈಗೊಂಡು, ಈ ಪ್ರಕ್ರಿಯೆಗಳಿಗೆ ಮೆ\|\| ಐಡೆಕ್‌ನ ಸೇವೆಗಳನ್ನು ಬಳಸಿಕೊಳ್ಳಲಾಗುತ್ತಿದೆ.<br><br>ಆರ್.ಎಫ್.ಕ್ಯೂ. ಅನ್ನು ಏಪ್ರಿಲ್ 2017, ಆಗಸ್ಟ್ 2018 ಹಾಗೂ ಮಾರ್ಚ್ 2019 ರಲ್ಲಿ ಪ್ರಕಟಿಸಲಾಗಿತ್ತು. ಆರ್ .ಎಫ್.ಕ್ಯೂ.ಗೆ ಯಾವುದೇ ಅರ್ಜಿ ಸ್ವೀಕೃತವಾಗಿರುವುದಿಲ್ಲ.<br><br>ಆರ್.ಎಫ್.ಕ್ಯೂ. ಅನ್ನು ಕಂಪನಿಯು ಮೊದಲೇ ಅಪ್ ಲೋಡ್ ಮಾಡಲಾಗಿದ್ದು ಮತ್ತು ಆರ್.ಎಫ್.ಕ್ಯೂ. ಗಾಗಿ ಈಗಾಗಲೇ ವ್ಯಾಪಕ ಪ್ರಚಾರವನ್ನು ನೀಡಲಾಗಿರುವುದರಿಂದ ಪ್ರಸ್ತಾವನೆಗಾಗಿ ವಿನಂತಿಯನ್ನು (ಆರ್‌ಎಫ್‌ಪಿ) ನೇರವಾಗಿ ದಿನಾಂಕ 25.11.2020 ರಂದು ಅಪ್‌ಲೋಡ್ ಮಾಡಲಾಗಿದ್ದು, ಇ-ಟೆಂಡರ್ ತೆರೆದಾಗ ಯಾವುದೇ ಬಿಡ್‌ಗಳು ಸ್ವೀಕೃತವಾಗಿರುವುದಿಲ್ಲ.<br><br>ನಿರೀಕ್ಷಿತ ಬಿಡ್ಡುದಾರರು ನೀಲಗಿರಿ ಬೆಳೆಯಲು ಎಂ.ಪಿ.ಎಂ.ಗೆ ವಿನಾಯಿತಿ ಹಾಗೂ ಯಾವುದೇ ಹೊಣೆಗಾರಿಕೆಗಳಿಲ್ಲದ ಕಂಪನಿಯ ಕಾರ್ಯಾಚರಣೆಗಳನ್ನು ನಡೆಸಲು ಬಯಸಿರುತ್ತಾರೆ. |

| | | |
|---|---|---|
| | | ಅದರಂತೆ, ನೀಲಗಿರಿ ಬೆಳೆಯಲು ಎಂ.ಪಿ.ಎಂ.ಗೆ ವಿನಾಯಿತಿ ಮತ್ತು ಬಾಕಿ ಉಳಿದಿರುವ ರೂ.1102 ಕೋಟಿಗಳ ಹೊಣೆಗಾರಿಕೆಗಳ ಕುರಿತು ಸರ್ಕಾರವು ತೀರ್ಮಾನ ತೆಗೆದುಕೊಳ್ಳ ಬೇಕಾಗಿರುತ್ತದೆ.<br><br>ದಿನಾಂಕ:07.09.2023ರಂದು ಇಲಾಖಾ ಸಚಿವರ ಅಧ್ಯಕ್ಷತೆಯಲ್ಲಿ ಸಭೆ ನಡೆದಿರುತ್ತದೆ. ಈ ಸಭೆಯಲ್ಲಿ ತೀರ್ಮಾನಿಸಿದಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ಸಹ ದಿ:17.11.2023 ರಂದು ಸಭೆ ನಡೆಸಿದ್ದು ಈ ಕೆಳಕಂಡಂತೆ ಕ್ರಮವಹಿಸಲಾಗಿದೆ:<br><br>[1] ಅರಣ್ಯ ಇಲಾಖೆಯ ತಜ್ಞರ ಸಮಿತಿಯು ನೀಲಗಿರಿ ಬೆಳೆಯಲು ಎಂ.ಪಿ.ಎಂ.ಗೆ ವಿನಾಯಿತಿ ನೀಡುವ ಸಂಬಂಧ ಪರಿಶೀಲಿಸಿ ವರದಿ ನೀಡಬೇಕಾಗಿದೆ.<br><br>[2] KPTCL/MESCOM ಗೆ ಪಾವತಿ ಮಾಡಬೇಕಾದ ವಿದ್ಯುತ್ ಶುಲ್ಕ ಮತ್ತು ಅದರ ಮೇಲಿನ ಬಡ್ಡಿಯನ್ನು ಮನ್ನಾ ಮಾಡಲು ಕ್ರಮ ಕೈಗೊಳ್ಳುವಂತೆ ಇಂಧನ ಇಲಾಖೆಯನ್ನು ದಿನಾಂಕ 08.01.2024 ರಂದು ಕೋರಲಾಗಿದೆ.<br><br>[3] ಕಂಪನಿಯ ಸಾಲಗಳು/ಬಾಕಿಗಳ ಕುರಿತು ಆರ್ಥಿಕ ಇಲಾಖೆಯೊಡನೆ ಸಮಾಲೋಚಿಸಲಾಗುತ್ತಿದೆ. |
| ಆ. | ಈ ಕಾರ್ಖಾನೆಯನ್ನು ಯಾವಾಗ ಪುನರ್ ಪ್ರಾರಂಭಿಸಲಾಗುತ್ತದೆ? (ವಿವರ ನೀಡುವುದು) | ನಿರೀಕ್ಷಿತ ಬಿಡ್ಡುದಾರರು ನೀಲಗಿರಿ ಬೆಳೆಯಲು ಎಂ.ಪಿ.ಎಂ.ಗೆ ವಿನಾಯಿತಿ ಹಾಗೂ ಯಾವುದೇ ಹೊಣೆಗಾರಿಕೆಗಳಿಲ್ಲದ ಕಂಪನಿಯ ಕಾರ್ಯಾಚರಣೆಗಳನ್ನು ನಡೆಸಲು ಬಯಸುವುದರಿಂದ ಅದರಂತೆ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದ್ದು ತದನಂತರ ಕಾರ್ಖಾನೆಯನ್ನು ಪುನರ್ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುತ್ತದೆ. |

ಸಂಖ್ಯೆ:ಸಿಐ 08 ಸಿಪಿಎಂ 2024(ಇ)

(ಎಂ.ಬಿ. ಪಾಟೀಲ)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು.